ಮೈಸೂರ ಗೆಜೆಟ್

ಸರ್ಕಾರದಿಂದ ಫಾಯಿಷ್ ಆದ್ದು.

ಬೆಂಗಳೂರು, ಶನಿವಾರ, ಜೂನ್ ತಾ॥ 4, ಸನ್ 1887.

ಈ ಭಾಗವನ್ನು ಪ್ರತ್ಯೇಕ ಕೇರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಭಾಗ.

ಇಂಡ್ಯಗವರ್ನಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್‌ರು, ವಗ್ಯೆರೇರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಫಿನಾನ್ಷಿಯಲ್ ಇಲಾಖೆ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್‌ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಯೆ, ಷರಾ ಬರೆಯಲ್ಪಡಬಹುದಾದಂಥಾ ಸದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡನ್ನಲ್ಲಿ, ಸ್ಟ್ಯಾಂಡ್ ಬೀದಿ 59ನೇ ನಂಬರ್ ಕಟ್ಟಣದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಯೆ ಅವರುಗಳೊಡನೆ ಮೈಸೂರು ಗವರ್ನಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡನ್ನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟ್ವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಫ್ಫೇಸ್‌ಮೆಂಟ್ ಯಾನೇ ಷರಾ ಬಗ್ಯೆ ಇದರಡಿ ರುಜಾ ಮಾಡಿರುವರ ಆಫೀಸಿಗೆ ಕಳುಹಿನತಕ್ಕದ್ದು.

ಬಡ್ಡಿಯು, ಮದ್ರಾಸ್‌ನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಪ್ಲಿಕೇಟಾದ ಡಿಮಾಂಡ್ ಡ್ರಾಫ್ಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಫ್ಫೇಸ್‌ಮೆಂಟ್ ಬಗ್ಯೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡ್ಸನ್,
ಕಾಂಪ್ಟ್ರೋಲರ್.

ಅಂಬಕೇ ಇಲಾಖೆ.

ನಂ. 110—66. ತಾರೀಖು 20ನೇ ಮೇ 1887.

ಇದರಿಂದ ಸಕಲ ಜನಗಳಿಗೂ ತಿಳಿಯುವ ಬಗ್ಯೆ ಪ್ರಕಟಿಸಲ್ಪಡುವದೇನಂದರೆ, ಮೈಸೂರು ಶ್ರೀಮನ್ ಮಹಾರಾಜ ರಾಜಾಸಾಹೆಬ್ ಬಹದೂರವರ ದಿವಾನರವರ ಆಜ್ಞೆ ಅನುಸರಿಸಿ ಈ ಕೆಳಗೆ ಕಂಡ ಸ್ಥಳಗಳೊಳಗೆ ಹೋಬಳಿ ಅಂಬಕೇ ಆಫೀಸುಗಳು ಸ್ಥಾಪಿಸಲ್ಪಟ್ಟಿರುತ್ತೆ.

ತಾಲ್ಲೂಕು	ಅಂಬಕೇ ಆಫೀಸು ಸ್ಥಾಪಿಸಲ್ಪಟ್ಟ ಸ್ಥಳಗಳ ಹೆಸರು.
ಹೊನ್ನಾಳಿ	ಸಾಲಂಗ.
ನಗರ	ರೈರ್ವಪೇಟೆ.

ಬಿ. ಮರಿಗಂಗಯ್ಯ,
ಅಂಬಕೇ ಬಕ್ಷಿ.